ಯಾರು ಜ್ಯೋತಿಷ್ಯ ವಿದ್ಯೆಯನ್ನು ಗಳಿಸುತ್ತಾರೋ ಅವರು ವಾಮಾಚಾರದ ಒಂದು ಶಾಖೆಯನ್ನು ಗಳಿಸುತ್ತಾರೆ. ಅದರ ಬಗ್ಗೆ ಹೆಚ್ಚು ವಿದ್ಯೆಯನ್ನು ಗಳಿಸಿದವರು ಹೆಚ್ಚು ವಾಮಾಚಾರವನ್ನು ಗಳಿಸುತ್ತಾರೆ

ಇಬ್ನ್ ಅಬ್ಬಾಸ್ (ಅಲ್ಲಾಹು ಅವರಿಬ್ಬರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಯಾರು ಜ್ಯೋತಿಷ್ಯ ವಿದ್ಯೆಯನ್ನು ಗಳಿಸುತ್ತಾರೋ ಅವರು ವಾಮಾಚಾರದ ಒಂದು ಶಾಖೆಯನ್ನು ಗಳಿಸುತ್ತಾರೆ. ಅದರ ಬಗ್ಗೆ ಹೆಚ್ಚು ವಿದ್ಯೆಯನ್ನು ಗಳಿಸಿದವರು ಹೆಚ್ಚು ವಾಮಾಚಾರವನ್ನು ಗಳಿಸುತ್ತಾರೆ."
[صحيح] [رواه أبو داود وابن ماجه وأحمد]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ತಿಳಿಸುವುದೇನೆಂದರೆ ನಕ್ಷತ್ರಗಳು, ರಾಶಿಗಳು, ಅವುಗಳ ಚಲನವಲನಗಳು, ಪ್ರವೇಶ ಮತ್ತು ನಿರ್ಗಮನದ ಮೂಲಕ ಭವಿಷ್ಯದಲ್ಲಿ ಸಂಭವಿಸುವ ಜನನ, ಮರಣ, ರೋಗ ಮುಂತಾದ ಸಂಗತಿಗಳಲ್ಲಿ ಅವು ಭೂಮಿಯಲ್ಲಿರುವವರ ಮೇಲೆ ಬೀರುವ ಪರಿಣಾಮಗಳು ಮುಂತಾದವುಗಳನ್ನು ಕಲಿಯುವುದು ಅಥವಾ ಅವುಗಳ ಜ್ಞಾನವನ್ನು ಪಡೆಯುವುದು ವಾಮಾಚಾರದ ಒಂದು ಭಾಗವನ್ನು ಕಲಿಯುವುದಕ್ಕೆ ಸಮವಾಗಿದೆ; ಮತ್ತು ಈ ವಿದ್ಯೆಯನ್ನು ಹೆಚ್ಚು ಹೆಚ್ಚು ಕಲಿತರೆ ಅದು ವಾಮಾಚಾರವನ್ನು ಹೆಚ್ಚು ಹೆಚ್ಚು ಕಲಿಯುವುದಕ್ಕೆ ಸಮವಾಗಿದೆ.

http://www.sunnah.global/hadeeth/kn/show/5989